ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 : ದಿನಾಂಕ : 16–01–2020

# ಪತ್ರಕರ್ತರ ಗಮನಕ್ಕೆ

ಫೆಬ್ರವರಿ 5, 6 ಮತ್ತು 7 ರಂದು ಕಲಬುರಗಿಯಲ್ಲಿ ಜರುಗಲಿರುವ 85 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವರದಿಗಾಗಿ ಮಾಧ್ಯಮ ಪ್ರತಿನಿಧಿಗಳಿಗೆ ಅಧಿಕೃತ ಪ್ರವೇಶ ಪತ್ರ ನೀಡಲಾಗುವುದು. ಈ ಸಮ್ಮೇಳನದಲ್ಲಿ ಭಾಗವಹಿಸಲಿಚ್ಚಿಸುವ ಮಾಧ್ಯಮ ಪ್ರತಿನಿಧಿಗಳು ಮಾನ್ಯತಾ ಪತ್ರ ಅಥವಾ ತಮ್ಮ ಸುದ್ದಿ ಸಂಸ್ಥೆಯ ಶಿಫಾರಸ್ಸು ಪತ್ರದೊಂದಿಗೆ ಗುರುತಿನ ಚೀಟಿಯ ನಕಲು ಪ್ರತಿ ಹಾಗೂ 3 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ದಿನಾಂಕ 17–01–2020 ಸಂಜೆ 5–00 ಗಂಟೆಯೊಳಗಾಗಿ ಸುದ್ದಿ ಮತ್ತು ಪತ್ರಿಕಾ ಶಾಖೆಯ ಜಡಿಯಪ್ಪ ಗೆದ್ಲಗಟ್ಟಿ, ಸಹಾಯಕ ನಿರ್ದೇಶಕರು ಇವರಿಗೆ ಸಲ್ಲಿಸಲು ಕೋರಿದೆ.

## ಪತ್ರಿಕಾ ಆಮಂತ್ರಣ

1. ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ವತಿಯಿಂದ ರಾಷ್ಟ್ರೀಯ ಮಾದರಿ ಸಮೀಕ್ಷೆ 78ನೇ ಸುತ್ತಿನ **"Domestic tourism expenditure and multiple indicators"** ಎಂಬ ವಿಷಯ ಕುರಿತಂತೆ ರಾಜ್ಯ ಮಟ್ಟದ ತರಬೇತಿ ಕಾರ್ಯಾಗಾರ.

   ದಿನಾಂಕ: 17–01–2020, ಶುಕ್ರವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ

   ಸ್ಥಳ: ಹೆಚ್.ಆರ್. ಹರಕೇರಿ ಸಭಾಂಗಣ, ಕೃಷಿ ತಂತ್ರಜ್ಞರ ಸಂಸ್ಥೆ (ಐ.ಎ.ಟಿ), ನಂ. 15, ಕ್ವೀನ್ಸ್ ರಸ್ತೆ, ಬೆಂಗಳೂರು – 560 052.

**2. XLIII Indian Social Science Congress**

Current Science of Nature – Human – Society in India.

**Inauguration by:**

**Shri B.S. Yediyurappa, Hon'ble Chief Minister,**
**Government of Karnataka.**

**Chief Guest:**

**Dr. C.N. Ashwath Narayan,**
**Hon'ble Deputy Chief Minister and Minister for Higher Education,**
**IT & BT and Medical Education, Government of Karnataka.**

**Date: 17-01-2020, Friday, Time: 10.00 am,**

**Venue: Jnana Jyothi Auditorium, Central College Campus,**
**Palace Road, Bengaluru – 560 001**

**3.** ಸಿಎಸ್‌ಆರ್ ಪಾಲುದಾರರ ಕೊಡುಗೆಯನ್ನು ಗುರುತಿಸುವುದು ಮತ್ತು ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟದ ಸುಧಾರಣೆಗೆ ಕಾರ್ಯತಂತ್ರದ ಕುರಿತು ಕಾರ್ಯಾಗಾರ.

ಉದ್ಘಾಟನೆ:
ಎಸ್. ಸುರೇಶ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಸಕಾಲ ಸಚಿವರು.

ದಿನಾಂಕ: 17–01–2020, ಶುಕ್ರವಾರ, ಸಮಯ: ಬೆಳಿಗ್ಗೆ–10.30 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 318, ಮೂರನೇ ಮಹಡಿ, ವಿಕಾಸಸೌಧ, ಬೆಂಗಳೂರು.

**4. KAS** ಯಶಸ್ವಿ ಅಭ್ಯರ್ಥಿಗಳಿಗೆ ಸನ್ಮಾನ ಸಮಾರಂಭ

ಘನ ಉಪಸ್ಥಿತಿ:
ಬಿ. ಶ್ರೀರಾಮುಲು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.
ವಿ. ಸೋಮಣ್ಣ, ವಸತಿ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು
ಸೀಮಂತ್ ಕುಮಾರ್ ಸಿಂಗ್, ಪೊಲೀಸ್ ಮಹಾನಿರೀಕ್ಷಕರು, ಬೆಂಗಳೂರು ಕೇಂದ್ರ ವಲಯ.
ಬಿ.ಆರ್ ರವಿಕಾಂತೇಗೌಡ, ಜಂಟಿ ಪೊಲೀಸ್ ಆಯುಕ್ತರು, ಸಂಚಾರ ವಿಭಾಗ, ಬೆಂಗಳೂರು ನಗರ.
ಜಿನೇಂದ್ರ ಖನಗಾವಿ, ಸೂಪರಿಂಟೆಂಡೆಂಟ್ ಆಫ್ ಪೊಲೀಸ್, ಭ್ರಷ್ಟಚಾರ ನಿಗ್ರಹ ದಳ.

**ದಿನಾಂಕ: 17–01–2020, ಶುಕ್ರವಾರ, ಸಮಯ: ಸಂಜೆ 5.00 ಗಂಟೆಗೆ**
**ಸ್ಥಳ: KASSIA ಸಭಾಂಗಣ, ವಿಜಯನಗರ, ಬೆಂಗಳೂರು.**

**5. ಕರ್ನಾಟಕ ಲಲಿತಕಲಾ ಅಕಾಡೆಮಿ ವತಿಯಿಂದ 32 ನೇ ತಿಂಗಳ ಚಿತ್ರ ಕಾರ್ಯಕ್ರಮ.**

**ಉದ್ಘಾಟನೆ:**
**ಉದಯ ಗರುಡಾಚಾರ್, ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.**

**ಅಧ್ಯಕ್ಷತೆ:**
**ಮಹೇಂದ್ರ ಡಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ.**

**ದಿನಾಂಕ: 17–01–2020, ಶುಕ್ರವಾರ, ಸಮಯ: ಸಂಜೆ 5.30 ಗಂಟೆಗೆ**
**ಸ್ಥಳ: ವರ್ಣಆರ್ಟ್ ಗ್ಯಾಲರಿ, ಎರಡನೇ ಮಹಡಿ, ಕನ್ನಡ ಭವನ, ಬೆಂಗಳೂರು.**

**ಪತ್ರಿಕಾ ಪ್ರಕಟಣೆ**

# ಕರ್ನಾಟಕ ಉಗ್ರಾಣ ನಿಗಮದ ವಿವಿಧ ಸವಲತ್ತುಗಳು

**ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ದಾಸ್ತಾನು ಸೇವಾ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರ್ನಾಟಕ ರಾಜ್ಯ ಉಗ್ರಾಣ ನಿಗಮ ವ್ಯವಸ್ಥಾಪಕ ನಿರ್ದೇಶಕರು ರೈತರು ಹಾಗೂ ವ್ಯಾಪಾರಸ್ಥರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕರ್ನಾಟಕ ರಾಜ್ಯ ಉಗ್ರಾಣ ನಿಗಮವು ಕರ್ನಾಟಕ ರಾಜ್ಯ ಸರ್ಕಾರದ ಸಾರ್ವಜನಿಕ ಸೇವಾ ಸಂಸ್ಥೆಯಾಗಿದ್ದು, ಕರ್ನಾಟಕ ರಾಜ್ಯ ಉಗ್ರಾಣ ನಿಗಮದಿಂದ ರೈತರು, ವ್ಯಾಪರಸ್ಥರು ಅಕ್ಕಿ ಗಿರಣಿ ಮಾಲೀಕರು ಸೇರಿದಂತೆ ಸಂಬಂಧಿತದವರುಗಳಿಗಾಗಿ ವೈಜ್ಞಾನಿಕವಾದ ದಾಸ್ತಾನು ಸೇವಾಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಉಗ್ರಾಣ ನಿಗಮವು ಕರ್ನಾಟಕ ಸರ್ಕಾರದ ಸಹಕಾರ ಇಲಾಖೆ ಸೇರಿದ ಸಂಸ್ಥೆಯಾಗಿದೆ. ರಾಜ್ಯಾದ್ಯಂತ 149 ರಾಜ್ಯ ಉಗ್ರಾಣ ಶಾಖೆಗಳನ್ನು ಮತ್ತು 7 ಪ್ರಾದೇಶಿಕ ಕಚೇರಿಗಳನ್ನು ಹೊಂದಿರುತ್ತದೆ.

ಸುಗ್ಗಿಯ ಕಾಲದಲ್ಲಿ ಮಾರುಕಟ್ಟೆ ಬೆಲೆ ಸಾಮಾನ್ಯವಾಗಿ ಕಡಿಮೆಯಾಗುವುದರಿಂದ ರೈತರು ಭ್ರಮನಿರಸನರಾಗಿ ತಮ್ಮ ಕೃಷಿ ಉತ್ಪನ್ನಗಳನ್ನು ಅಗ್ಗದ ಬೆಲೆಗೆ ಮಾರಾಟ ಮಾಡುವುದನ್ನು ತಡೆಯಲು, ಮಧ್ಯವರ್ತಿಗಳು, ದಳ್ಳಾಳಿಗಳ ಹಾವಳಿಗಳಿಗೆ ತುತ್ತಾಗುವುದನ್ನು ತಪ್ಪಿಸಲು ರಾಜ್ಯ ಉಗ್ರಾಣದಲ್ಲಿ ದಾಸ್ತಾನು ಮಾಡಲಾದ ಸರಕಿನ ಉಗ್ರಾಣ ರಶೀದಿಗಳ ಆಧಾರದ ಮೇಲೆ ಬ್ಯಾಂಕುಗಳು ಮತ್ತು ಇತರೆ ಹಣಕಾಸಿನ ಸಂಸ್ಥೆಗಳಿಂದ ಸಾಲ–ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ.

ಕೃಷಿ ಉತ್ಪನ್ನಗಳಿಗೆ ಸುಗ್ಗಿಯ ಕಾಲದ ನಂತರ ಹೆಚ್ಚಾಗಬಹುದಾದ ದರದಲ್ಲಿ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡುವುದರಿಂದ ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ದರವನ್ನು ಪಡೆಯಬಹುದಾಗಿರುತ್ತದೆ.

ಸರ್ಕಾರವು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ (MSP) ರೈತರಿಂದ ಭತ್ತ, ಬಿಳಿಜೋಳ, ರಾಗಿ, ತೊಗರಿ, ಹೆಸರು, ಮೊದಲಾದವುಗಳನ್ನು ಖರೀದಿಸಲಾಗುತ್ತಿದೆ.

ಸರ್ಕಾರದ ಮಹತ್ವಾಂಕ್ಷೆ ಯೋಜನೆಗಳಾದ ಸರ್ಕಾರದ ಬೆಂಬಲ ಬೆಲೆ ಯೋಜನೆ, ಸಾರ್ವಜನಿಕ ಪಡಿತರ ಯೋಜನೆ ಮೊದಲಾದವುಗಳಿಗೆ ರಾಜ್ಯ ಉಗ್ರಾಣದಲ್ಲಿ ವೈಜ್ಞಾನಿಕ ಸಂಗ್ರಹಣಾ ಸ್ಥಳಾವಕಾಶವನ್ನು ಒದಗಿಸಲಾಗುತ್ತಿದೆ.

ರೈತರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ದಾಸ್ತಾನುದಾರರಿಗಾಗಿ ರಾಜ್ಯ ಉಗ್ರಾಣದಲ್ಲಿ ದಾಸ್ತಾನು ಸ್ಥಳವನ್ನು ಮೀಸಲಿರಿಸಲಾಗಿರುತ್ತದೆ.

ವಾಸ್ತಾವಿಕ ಕೃಷಿಕರಿಂದ ಶೇಖರಣೆ ಮಾಡಿದ ದಾಸ್ತಾನಿಗೆ ಸಂಗ್ರಹಣಾ ಶುಲ್ಕದಲ್ಲಿ ರೈತರಿಗೆ ಶೇ 15 ರಷ್ಟು ಮಹಿಳಾ ರೈತರಿಗೆ ಶೇ 20 ರಷ್ಟು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ ಶೇ 25 ರಷ್ಟು ರಿಯಾಯಿತಿ ನೀಡಲಾಗುವುದು.

ರಾಜ್ಯಾದ್ಯಂತ ಇರುವತಹ ಅಗತ್ಯವಿರುವ ಗೋದಾಮುಗಳನ್ನು, ದಾಸ್ತಾನು ಸ್ಥಳವನ್ನು ಮಾಸಿಕ ಬಾಡಿಗೆ ಆಧಾರದ ಮೇಲೂ ವಹಿಸಿಕೊಡಲಾಗುವುದು.

ರಾಜ್ಯ ಉಗ್ರಾಣಗಳಲ್ಲಿ ದಾಸ್ತಾನು ಮಾಡಲಾಗುವ ಸರಕುಗಳ ಹ್ಯಾಡ್ಲಿಂಗ್ ಮತ್ತು ಟ್ರಾನ್ಸ್‌ಪೋರ್ಟೇಷನ್ ಕಾರ್ಯಗಳನ್ನು ನಿರ್ವಹಿಸಲು ನಿಗಮದಿಂದ ನೇಮಕವಾಗಿರುವ ಗುತ್ತಿಗೆದಾರರ ಸೌಲಭ್ಯವಿರುತ್ತದೆ.

ರಾಜ್ಯ ಉಗ್ರಾಣಗಳಲ್ಲಿ ವೇಬ್ರಿಡ್ಜ್‌ಗಳನ್ನು ತೂಕಮಾಡಲು ಉಪಯೋಗಿಸಿಕೊಳ್ಳಬಹುದಾಗಿದೆ.

ರಾಜ್ಯ ಉಗ್ರಾಣಗಳಲ್ಲಿ ದಾಸ್ತಾನು ಮಾಡಲಾದ ಸರಕುಗಳನ್ನು ವೈಜ್ಞಾನಿಕ ವಿಧಾನಗಳಿಂದ ಸಂರಕ್ಷಿಸಲಾಗುವುದು.

ರಾಜ್ಯ ಉಗ್ರಾಣಗಳಲ್ಲಿ ದಾಸ್ತಾನು ಮಾಡಲಾಗುವ  ಸರಕುಗಳಿಗೆ ಬೆಂಕಿ, ಕಳವು ಮತ್ತು ಡಕಾಯಿತಿ ಮೊದಲಾದ ಅಪಾಯಗಳಿಗೆ ವಿಮೆ ಮುಖಾಂತರ ರಕ್ಷಣೆ ಇರುತ್ತದೆ.

ರೈತರು, ವ್ಯಾಪಾರಸ್ಥರು, ಗಿರಣೀ ಮಾಲೀಕರು, ಭಾರತ ಆಹಾರ ನಿಗಮ, ರಸಗೊಬ್ಬರ ಕಂಪನಿಗಳು ಮತ್ತು ವಿತರಕರು, ಸರ್ಕಾರ-ಸರ್ಕಾರೇತರ ಸಂಸ್ಥೆಗಳು ಮೊದಲಾದವರುಗಳು ದಾಸ್ತಾನು ಮಾಡಬಹುದಾಗಿದೆ.

ಆಹಾರ ಧಾನ್ಯಗಳು, ಬೇಳೆಕಾಳುಗಳು, ಎಣ್ಣೆಬೀಜಗಳು, ಮೊದಲಾದ ಕೃಷಿ ಉತ್ಪನಗಳನ್ನು, ರಸಗೊಬ್ಬರ ಮೊದಲಾದವುಗಳನ್ನು ರಾಜ್ಯ ಉಗ್ರಾಣಗಳಲ್ಲಿ ದಾಸ್ತಾನು ಮಾಡಲಾಗುವುದು.

ರಾಜ್ಯ ಉಗ್ರಾಣದ ದಾಸ್ತಾನು ಸೇವಸೌಲಭ್ಯಗಳನ್ನು ಉಪಯೋಗಿಸಿಕೊಳ್ಳಲು ಹೆಚ್ಚಿನ ಮಾಹಿತಿಗಾಗಿ ಸಮೀಪದ ರಾಜ್ಯ ಉಗ್ರಾಣ ಕಚೇರಿ/ಪ್ರಾದೇಶಿಕ ವ್ಯವಸ್ಥಾಪಕರ ಕಚೇರಿ/ ಕೇಂದ್ರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

## ಕರ್ನಾಟಕ ಸಹಕಾರ  ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತ ದೇಶದಲ್ಲಿಯೇ ಎರಡನೇ ಸ್ಥಾನ – ಮುಖ್ಯಮಂತ್ರಿಗಳ ಮೆಚ್ಚುಗೆ

**ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)**

**ಕರ್ನಾಟಕ ಸಹಕಾರ ಹಾಲು ಉತಾದಕರ ಮಹಾಮಂಡಳಿ ನಿಯಮಿತ ಹಾಲು ಹಾಗೂ ಅದರ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟದಲ್ಲಿ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದ್ದು, ಈಗಾಗಲೇ ವಿವಿಧ ರಾಜ್ಯಗಳಲ್ಲಿ ತನ್ನ ಉತ್ಪನ್ನಗಳಿಗಾಗಿ ಪ್ರಖ್ಯಾತಿ ಹೊಂದಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.**

**ಇಂದು ನಗರದ ಖಾಸಗಿ ಹೋಟೆಲ್‌ನಲ್ಲಿ ಹಮ್ಮಿಕೊಂಡಿದ್ದ ನಂದಿನಿ ನೂತನ ಉತ್ಪನ್ನಗಳ ಬಿಡುಗಡೆಮಾಡಿ ಮಾತನಾಡಿದ ಅವರು ಪ್ರಸ್ತುತ ಗುಜರಾತಿನ ಅಮೂಲ್ ಹಾಲಿನ ಉತ್ಪಾದನೆಗಳ ಮಾರಾಟದಲ್ಲಿ ಮೊದಲನೇ ಸ್ಥಾನದಲ್ಲಿದ್ದು, ನಮ್ಮ ರಾಜ್ಯದ ಮಹಾಮಂಡಳಿ ಸಹ ಅದೇ ರೀತಿ ಬೆಳೆಯಲ್ಲಿ ಎಂದು ಆಶಿಸಿದರು.**

ರೈತರ ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಯಲ್ಲಿ ಅತ್ಯಂತ ಪ್ರಮುಖ ಪಾತ್ರವಹಿಸಿರುವ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ದಿನಕ್ಕೆ 24 ಕೋಟಿ ರೂ. ವ್ಯವಹಾರ ನಡೆಸುತ್ತಿದ್ದು, ಇದರಲ್ಲಿ ಶೇಕಡ 80 ಕ್ಕಿಂತ ಹೆಚ್ಚಿನವರು ಸಣ್ಣ ಮತ್ತು ಅತಿಸಣ್ಣ ರೈತರಾಗಿದ್ದಾರೆ.

ಈಗಾಗಲೇ ಹಲವು ಉತ್ಕೃಷ್ಟ ಹಾಲಿನ ಉತ್ಪನ್ನಗಳಿಗಾಗಿ ಹೆಸರುವಾಸಿಯಾಗಿರುವ ನಂದಿನಿ ಇಂದಿನಿಂದ ದೇಸಿ ಹಾಲು, ಚೀಸ್, ವಿವಿಧ ಮಾದರಿಯ ಯೋಗರ್ಟ್ , ವಿವಿಧ ಶ್ರೇಣಿಯ ನ್ಯಾಚುರಲ್ ಐಸ್ ಕ್ರೀಮ್ ಮತ್ತು ಇತರೆ ನಂದಿನಿ ಉತ್ಪನ್ನಗಳು ಮಾರುಕಟ್ಟೆಯಲ್ಲಿ ಲಭ್ಯವಿದ್ದು, ಮಹಾಮಂಡಳಿ ಇನ್ನು ಉನ್ನತ ಮಟ್ಟದಲ್ಲಿ ಬೆಳೆದು ರೈತರಿಗೆ ಸಹಕಾರಿಯಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತ ಅಧ್ಯಕ್ಷರಾದ ಶಾಸಕ ಬಾಲಚಂದ್ರ ಲ. ಜಾರಕಿಹೊಳಿ ಅವರು ಮಾತನಾಡಿ ರೈತರ ಇಂಡಸ್ಟ್ರಿಯಾಗಿದ್ದು, ಇದೊಂದು ರೈತರಿಂದ ಪ್ರಾರಂಭವಾದ ಸಹಕಾರ ತತ್ವದಡಿ ಬೆಳೆದ ಸಂಸ್ಥೆಯಾಗಿದೆ. ರಾಜ್ಯದಲ್ಲಿರುವ 14 ಹಾಲು ಒಕ್ಕೂಟಗಳು ಒಗ್ಗಟಾಗಿ ದುಡಿದಲ್ಲಿ ಸಂಸ್ಥೆಯನ್ನು ದೇಶ ವಿದೇಶಗಳಲ್ಲಿ ಬೆಳೆಸ ಬಹುದಾಗಿದೆ ಎಂದು ಹೇಳಿದರು.

ಈಗಾಗಲೇ ದುಬೈ ಸೇರಿದಂತೆ ಅಲ್ಲಿನ ಸುತ್ತಮುತ್ತಲಿನ ದೇಶಗಳಲ್ಲಿ ನಂದಿನಿ ಹಾಲಿನ ಉತ್ಪನ್ನಗಳನ್ನು ಮಾರಾಟ ಮಾಡಲು ಹಲವು ಖಾಸಗಿ ಕಂಪನಿಗಳು ಮುಂದೆ ಬಂದಿದ್ದು, ಮಾತುಕತೆ ಹಂತದಲ್ಲಿದೆ. ಈ ಹಿಂದೆ ಹಾಲು ಉತ್ಪಾದಕರಿಗೆ ಸರ್ಕಾರದ 2 ರೂ. ಸಹಾಯಧನವನ್ನು ನೀಡಲು ಆರಂಭಿಸಿದ್ದು, ಬಿ.ಎಸ್. ಯಡಿಯೂರಪ್ಪ ಅವರು ಹೊಸ ಕ್ರಾಂತಿಗೆ ನಾಂದಿ ಹಾಡಿದ್ದರು. ಪ್ರಸ್ತುತ, ಸಹಾಯಧನವನ್ನು 6 ರೂ.ಗಳಿಗೆ ಹೆಚ್ಚಿಸುವಂತೆ ಅವರು ಇದೇ ಸಮಯದಲ್ಲಿ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಿದರು.

ವ್ಯವಸ್ಥಾಪಕ ನಿರ್ದೇಶಕರಾದ ಬಿ.ಸಿ. ಸತೀಶ್ ಅವರು ಸ್ವಾಗತ ಕೋರಿದರು. ಕಾರ್ಯಕ್ರಮದಲ್ಲಿ ಗೃಹ ಮತ್ತು ಸಹಕಾರ ಸಚಿವ ಬಸವರಾಜ ಬೊಮ್ಮಾಯಿ, ಪಶುಸಂಗೋಪನೆ ಸಚಿವ ಪ್ರಭು ಬಿ. ಚವ್ಹಾಣ್ ಅವರು ಸೇರಿದಂತೆ ರಾಜ್ಯ ವಿವಿಧ ಹಾಲು ಒಕ್ಕೂಟಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಸದಸ್ಯರುಗಳು ಉಪಸ್ಥಿತರಿದ್ದರು.

## 2019ನೇ ಸಾಲಿನ ಪುಸ್ತಕ ಬಹುಮಾನಕ್ಕೆ – ಲೇಖಕರಿಂದ ಅರ್ಜಿ ಆಹ್ವಾನ

ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)

ಕರ್ನಾಟಕ ಯಕ್ಷಗಾನ ಅಕಾಡೆಮಿಯು ಯಕ್ಷಗಾನ (ತೆಂಕು, ಬಡಗು ಬಡಾಬಡಗು, ಯಕ್ಷಗಾನ ಗೊಂಬೆಯಾಟ) ಮೂಡಲಪಾಯ ಯಕ್ಷಗಾನ, ಕೇಳಿಕೆ, ಘಟ್ಟದಕೋರೆ ಮತ್ತು ತಾಳಮದ್ದಲೆ, ಇತ್ಯಾದಿ ಕಲಾಪ್ರಕಾರಗಳಲ್ಲಿ 2019ನೇ ಸಾಲಿನ ಕ್ಯಾಲೆಂಟರ್ ವರ್ಷದಲ್ಲಿ (ದಿನಾಂಕ: 1.1.2019 ರಿಂದ31.1–209 ರ ಒಳಗೆ) ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ/ಪ್ರಕಾಶಕರಿಂದ ಅರ್ಜಿ ಆಹ್ವಾನಿಸಿದೆ.

ಆಯ್ಕೆಯಾದ ಪುಸ್ತಕಕ್ಕೆ ರೂ. 25,000/- ಗಳ ಬಹುಮಾನವನ್ನು ನೀಡಲಾಗುವುದು. ಯಕ್ಷಗಾನದ ವಿವಿಧ ಆಯಾಮಗಳ ಬಗ್ಗೆ ಸಂಗೀತ, ಆಹಾರ, ಅಭಿನಯ, ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ ಪುಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು. ಸಂಪಾದಿತ, ಅಭಿನಂದನ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು.

ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸಿರುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇವರಿಗೆ 2020 ರ ಫೆಬ್ರವರಿ 7 ರ ಒಳಗಾಗಿ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸುವುದು. ಯಾವುದೇ ಕಾರಣಕ್ಕೂ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ (ದೂ 080-22113146) ಪಡೆಯಬಹುದಾಗಿದೆ ಎಂದು ಕರ್ನಾಟಕ ಯಕ್ಷಗಾನ ಅಕಾಡೆಮಿಯ ರಿಜಿಸ್ಟ್ರಾರ್ ಅವರು ತಿಳಿಸಿದ್ದಾರೆ.

## ದೇಹದಾರ್ಢ್ಯತೆ ಮತ್ತು ದೈಹಿಕ ಸಾಮಾರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 17-02-2018ರಂದು ನಡೆಸಿದ ಅಬಕಾರಿ ಇಲಾಖೆಯಲ್ಲಿನ 50 ಉಳಿಕೆ ಮೂಲ ವೃಂದದ ಅಬಕಾರಿ ಉಪನಿರೀಕ್ಷಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಹಾಗೂ ಅವರ ಮೀಸಲಾತಿಗೆ ಅನುಗುಣವಾಗಿ 1:5ರ ಅನುಪಾತದಲ್ಲಿ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯುಳ್ಳ ಪಟ್ಟಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಪ್ರಕಟಿಸಲಾಗಿದೆ.

ಈ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮಾರ್ಥ್ಯದ ಪರೀಕ್ಷೆ ನಡೆಸಲು ಜಿಲ್ಲಾವಾರು ಪಟ್ಟಿಯನ್ನು ಅಬಕಾರಿ ಆಯುಕ್ತರಿಗೆ ಕಳುಹಿಸಿಕೊಡಲಾಗಿದೆ. ಈ ಬಗ್ಗೆ ಅಭ್ಯರ್ಥಿಗಳು ಸಂಬಂಧಿತ ಪ್ರಾಧಿಕಾರಿಗಳಿಂದ ವೈಯಕ್ತಿಕವಾಗಿ ದೇಹದಾರ್ಢ್ಯತೆ/ ದೈಹಿಕ ಸಾಮಾರ್ಥ್ಯ ಪರೀಕ್ಷೆಗೆ ಹಾಜರಾಗಲು ಸೂಚನಾ ಪತ್ರಗಳನ್ನು

**ಕಳುಹಿಸಲಾಗುವುದು. ಸೂಚನಾ ಪತ್ರ ಸ್ವೀಕೃತವಾದ ನಂತರ ದೇಹದಾರ್ಢ್ಯತೆ/ ದೈಹಿಕ ಸಾಮಾರ್ಥ್ಯ ಪರೀಕ್ಷೆಗೆ ಹಾಜರಾಗುವಂತೆ ಸಂಬಂಧಿತ ಅಭ್ಯರ್ಥಿಗಳಿಗೆ ಕರ್ನಾಟಕ ಲೋಕಸೇವಾ ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.**

## ನೇರ ಫೋನ್-ಇನ್ ಕಾರ್ಯಕ್ರಮ

**ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)**

ಬೆಂಗಳೂರು ಜಲಮಂಡಳಿಯು ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಮಂಡಳಿಯ ಮಾನ್ಯ ಅಧ್ಯಕ್ಷರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಸಂಬಂಧ **ದಿನಾಂಕ:18.01.2020 ರಂದು ಬೆಳಗ್ಗೆ 09:00 ರಿಂದ 10:30** ರವರೆಗೆ ನೇರ ಫೋನ್ ಇನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಫೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಹಾಗೂ **ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು** ದೂರವಾಣಿ ಸಂಖ್ಯೆ: **080-22945119**ನ್ನು ಸಂಪರ್ಕಿಸುವಂತೆ **ಬೆಂಗಳೂರು ಜಲ ಮಂಡಳಿಯು ಪ್ರಕಟಣೆಯಲ್ಲಿ ತಿಳಿಸಿದೆ**.

## Phone-in program

Bangalore: January 16 (Karnataka Information)

BWSSB is conducting a Phone-in program with Hon'ble Chairman BWSSB on Saturday from 09:00 am to 10:30 am. Accordingly, Phone-in Program with Hon'ble Chairman is held **on 18.01.2020 from 09:00 am to 10:30 am**. So we are here by requesting the public to discuss and redressal the grievances concerned with the Water Billing, Manhole Overflowing, Meter Reading issues, Improper Water Supply and Sanitary issues. Public can contact through the phone number:**080-22945119**. **Consumers to give the R.R.Number details before raising complaint**.

## Photo Caption:

Shri Vajubhai Vala Hon’ble Governor inaugurate one of the world’s largest clock with the message “Green-Clean Bengaluru & Unity for Growth’’ on the occasion of the 20 th India International Watch & Clock Fair, Samaya Bharati-2020 held at Palace Grounds. Dr. Ashwath Narayan, Deputy Chief Minister,Sri. Hemal Mihir Kharod, Chairman of Samaya Bharati Organizing Committee were present.  pic by, Antony anjee

## ಸಚಿವರ ಪ್ರವಾಸ

**ಬೆಂಗಳೂರು ಜನವರಿ 16 (ಕರ್ನಾಟಕ ವಾರ್ತೆ)**

**ವಸತಿ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು ಹಾಗೂ ಮೈಸೂರು ಮತ್ತು ಮಡಿಕೇರಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ವಿ. ಸೋಮಣ್ಣ ಅವರು ಜನವರಿ 19 ರಂದು ಮಂಡ್ಯ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ಕೇಂದ್ರಸ್ಥಾನಕ್ಕೆ ಹಿಂದಿರುಗುವರು ಎಂದು ಪ್ರಕಟಣೆ ತಿಳಿಸಿದೆ.**